ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY

ಕೃಷ್ಣತುಂಗ ಆವರಣ, ಮಂತ್ರಾಲಯ ರಸ್ತೆ, ರಾಷ್ಟ್ರೀಯ ಹೆದ್ದಾರಿ–167, ಯರಗೇರಾ – 584 133, ರಾಯಚೂರು, ಕರ್ನಾಟಕ

ಕಾಲೇಜು ಅಭಿವೃದ್ಧಿ ಮಂಡಳಿ

ಕ್ರ.ಸಂ.:ರಾವಿರಾ/ಸಿಡಿಸಿ/2024–25/311 ದಿನಾಂಕ: 8/10/2024

# ಸುತ್ತೋಲೆ

ವಿಷಯ: 1. ಕರ್ನಾಟಕ ವಿಶ್ವವಿದ್ಯಾಲಯಗಳ ಅಧಿನಿಯಮ 200ರ ಪ್ರಕರಣ 59ರಡಿ ಕ್ರಮವಹಿಸುವ ಸಂಯೋಜನಾ ಪ್ರಸ್ತಾವನೆಗಳಿಗೆ 2025-26ನೇ ಸಾಲಿನ ಸಂಯೋಜನಾ ಪ್ರಕ್ರಿಯೆಯ ವೇಳಾಪಟ್ಟಿ ಕುರಿತು
2. 2025-26ನೇ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಯ ಶೈಕ್ಷಣಿಕ ವೇಳಾಪಟ್ಟಿ ಕುರಿತು

ಉಲ್ಲೇಖ: **ಸರ್ಕಾರಿ ಆದೇಶ ಸಂ. ಇಡಿ 212 ಯುಎನ್ ಇ 2024 ಬೆಂಗಳೂರು ದಿ.04-10-2024**

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ , 2025-26 ನೇ ಸಾಲಿಗೆ ಕಾಲೇಜುಗಳ ಸಂಯೋಜನೆ ಪ್ರಾರಂಭಿಸುವಂತೆ ಉನ್ನತ ಶಿಕ್ಷಣ ಇಲಾಖೆಯು ನಿರ್ದೇಶನ ನೀಡಿದೆ (ಅನುಬಂಧ -1 ಪ್ರತಿ ಲಗತಿಸಲಾಗಿದೆ). ಅಲ್ಲದೇ 2025-26ನೇ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಯ ಶೈಕ್ಷಣಿಕ ವೇಳಾಪಟ್ಟಿಯನ್ನು ಕೂಡಾ ಬಿಡುಗಡೆ ಗೊಳಿಸಿದೆ (ಅನುಬಂಧ -4 ಪ್ರತಿ ಲಗತಿಸಲಾಗಿದೆ)

2024-25ನೇ ಸಾಲಿನ ಸಂಯೋಜನಾ ಅಧಿಸೂಚನೆಗಳನ್ನು ದಿ. 16-10-2024ರೊಳಗಾಗಿ Speedpost ಮೂಲಕ ಎಲ್ಲ ಕಾಲೇಜುಗಳಿಗೆ ಕಳುಹಿಸಲಾಗುವುದು, ಅದರ pdf ನ್ನು WhatsApp ಮೂಲಕ ಎಲ್ಲ ಕಾಲೇಜುಗಳ ಪ್ರಾಚಾರ್ಯರರಿಗೆ ಕಳುಹಿಸಲಾಗುವುದು.

ದಿ. 25-10-2024 ರಿಂದ 15-10-2024 ರ ವರೆಗೆ ಕಳೆದ ವರ್ಷಗಳಂತೆ UUCMS ತಂತ್ರಾಂಶದ ಮೂಲಕ ಸಂಯೋಜನಾ ಅರ್ಜಿಯನ್ನು Online ಮೂಲಕ ಸಲ್ಲಿಸಬೇಕಾಗುತ್ತದೆ. ಈ ಕುರಿತು ಸಂಯೋಜನಾ ಶುಲ್ಕ ಮತ್ತು ವಿವರವಾದ ಮಾಹಿತಿಯನ್ನು ಮುಂಚಿತವಾಗಿ ರಾಯಚೂರು ವಿಶ್ವವಿದ್ಯಾಲಯದ Website ನಲ್ಲಿ ಪ್ರಕಟಿಸಲಾಗುತ್ತದೆ. ಸಂಯೋಜನಾ ಆಧಿಸೂಚನೆಯನ್ನು ಎರಡು ದಿನಪತ್ರಿಕೆಗಳಲ್ಲಿ ಜಾಹೀರಾತು ಪ್ರಕಟಣೆ ಮೂಲಕ ನೀಡಲಾಗುವುದು. ಅಲ್ಲದೇ ಸದರಿ ಮಾಹಿತಿಯನ್ನು WhatsApp groupಗಳಲ್ಲಿ ಕೂಡಾ share ಮಾಡಲಾಗುವುದು.

ಮೇಲ್ಕಾಣಿಸಿದ ಕಾರ್ಯಗಳಿಗೆ Common calender of eventsನ್ನು ಕರ್ನಾಟಕ ಸರ್ಕಾರ ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳಿಗೆ ಜಾರಿ ಮಾಡುತ್ತಿರುವದರಿಂದ ಯಾವುದೇ ಕಾಲಕ್ಕೂ ವಿವಿಧ ಸಂಯೋಜನಾ ಹಂತಗಳ ದಿನಾಂಕಗಳಲ್ಲಿ ಮಾಡಲಾಗುವದಿಲ್ಲ ಎಂದು ಸರ್ಕಾರ ಸ್ಪಷ್ಟ ನಿರ್ದೇಶನ ನೀಡಿದೆ.

ಈ ಹಿನ್ನೆಲೆಯಲ್ಲಿ ಸಂಯೋಜಿತ ಕಾಲೇಜುಗಳ ಪ್ರಾಚಾರ್ಯರು ಅಗತ್ಯವಾಗಿರುವ ಎಲ್ಲ ಪೂರ್ವ ತಯ್ಯಾರಿಗಳನ್ನು ಮಾಡಿಕೊಳ್ಳಬೇಕೆಂದು ಸೂಚಿಸಲಾಗಿದೆ.

8/10/2024

ನಿರ್ದೇಶಕರು
ಕಾಲೇಜು ಅಭಿವೃದ್ಧಿ ಮಂಡಳಿ
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು

ನಿರ್ದೇಶಕರು
ಕಾಲೇಜು ಅಭಿವೃದ್ಧಿ ಮಂಡಳಿ
ರಾಯಚೂರು ವಿಶ್ವವಿದ್ಯಾಲಯ
ರಾಯಚೂರು

## ಪತ್ರಿಕಾ ಪ್ರಕಟಣೆ

ಉನ್ನತ ಶಿಕ್ಷಣ ಇಲಾಖೆಯಡಿ ಬರುವ ರಾಜ್ಯದ ಸಾರ್ವಜನಿಕ ಮತ್ತು ಖಾಸಗಿ ವಿಶ್ವವಿದ್ಯಾಲಯಗಳ ಸಂಯೋಜಿತ ಕಾಲೇಜುಗಳಿಗೆ 2025-26ನೇ ಶೈಕ್ಷಣಿಕ ಸಾಲಿನ ಸಂಯೋಜನೆ ಹಾಗೂ ಶೈಕ್ಷಣಿಕ ವೇಳಾಪಟ್ಟಿಯನ್ನು ಅಂತಿಮಗೊಳಿಸುವ ಬಗ್ಗೆ.

ಸಂಯೋಜನೆ ಪ್ರಕ್ರಿಯೆ ಹಾಗೂ ಶೈಕ್ಷಣಿಕ ವೇಳಾಪಟ್ಟಿಯನ್ನು ಅಗತ್ಯ ಕಾಲಾವಕಾಶ ಮತ್ತು ಸ್ಪಷ್ಟವಾಗಿ ಪ್ರಕಟಿಸುವಂತೆ ಸರ್ಕಾರದಲ್ಲಿ ವಿವಿಧ ಮನವಿಗಳು ಸ್ವೀಕೃತಗೊಂಡ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ರಾಜ್ಯದ ಸಾರ್ವಜನಿಕ ಮತ್ತು ಖಾಸಗಿ ವಿಶ್ವವಿದ್ಯಾಲಯಗಳ ಸಂಯೋಜಿತ ಕಾಲೇಜುಗಳಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಸುಗಮವಾಗಿ ಜಾರಿಗೊಳಿಸಲು ಅನುವಾಗುವಂತೆ ಉನ್ನತ ಶಿಕ್ಷಣ ಇಲಾಖೆಯು 2025-26ನೇ ಶೈಕ್ಷಣಿಕ ಸಾಲಿಗೆ ವೇಳಾಪಟ್ಟಿಯನ್ನು ಪ್ರಕಟಿಸಲು ಉದ್ದೇಶಿಸಲಾಗಿದೆ.

2025-26ನೇ ಸಾಲಿನ ಶೈಕ್ಷಣಿಕ ಮತ್ತು ಸಂಯೋಜನಾ ವೇಳಾಪಟ್ಟಿಯು ಅಕ್ಟೋಬರ್, 2024 ರಂದು ಪ್ರಾರಂಭಗೊಂಡು ಮಾರ್ಚ್/ಏಪ್ರಿಲ್, 2025ರ ಮಾಹೆಯೊಳಗೆ ಅಂತ್ಯಗೊಳ್ಳಲಿರುವುದರಿಂದ ನಿಗದಿತ ವೇಳಾಪಟ್ಟಿಯಂತೆ ತರಗತಿಗಳು ಪ್ರಾರಂಭಗೊಳ್ಳಲಿವೆ. ಮಾನ್ಯ ಉನ್ನತ ಶಿಕ್ಷಣ ಸಚಿವರು 2025-26ನೇ ಸಾಲಿನ ಶೈಕ್ಷಣಿಕ/ಸಂಯೋಜನಾ ವೇಳಾಪಟ್ಟಿಯನ್ನು ಪುನರಾವಲೋಕಿಸಿ ಅನುಮೋದನೆ ನೀಡಿರುತ್ತಾರೆ.

**ಈ ಕೆಳಕಂಡಂತೆ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ:**

1. **ಅನುಬಂಧ-1:**ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿನ ವೃತ್ತಿಪರವಲ್ಲದ ಸ್ನಾತಕ/ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳಿಗೆ 2025-26ನೇ ಸಾಲಿನ ಸಂಯೋಜನೆ ಪ್ರಕ್ರಿಯೆ ವೇಳಾಪಟ್ಟಿ-ಸದರಿ ವೇಳಾಪಟ್ಟಿಯು ಕಾಲೇಜುಗಳ ವೃತ್ತಿಪರವಲ್ಲದ ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್ ಸಂಬಂಧಿತ ಹೊಸ ಕೋರ್ಸ್‌ಗಳ ಸಂಯೋಜನೆ, ಸಂಯೋಜನೆ ನವೀಕರಣ, ವಿದ್ಯಾರ್ಥಿ ಪ್ರಮಾಣ ಹೆಚ್ಚಳ/ಬದಲಾವಣೆ ಇತ್ಯಾದಿಯನ್ನು ಒಳಗೊಂಡಿರುತ್ತದೆ. ಈ ಪ್ರಕ್ರಿಯೆಯು UUCMS ಆನ್‌ಲೈನ್ ಪೋರ್ಟಲ್‌ನಲ್ಲಿ ಜರುಗಲಿದೆ.

2. **ಅನುಬಂಧ-2:** 2025-26ನೇ ಸಾಲಿಗೆ ಇಂಜಿನಿಯರಿಂಗ್ ಮತ್ತು ಇತರೆ ವೃತ್ತಿಪರ ಕೋರ್ಸ್‌ಗಳಿಗೆ ನಿರಾಕ್ಷೇಪಣೆ ಪ್ರಮಾಣ ಪತ್ರವನ್ನು ನೀಡಿ ಸೀಟ್ ಮ್ಯಾಟ್ರಿಕ್ಸ್‌ನಲ್ಲಿ ಅಳವಡಿಸುವ ಪ್ರಕ್ರಿಯೆ. ಪ್ರಸ್ತಾಪಿತ ಶೈಕ್ಷಣಿಕ ಚಟುವಟಿಕೆಗಳು ಎಐಸಿಟಿಇ ಹಾಗೂ ನೀಟ್ ಫಲಿತಾಂಶದ ಆಧಾರದ ಮೇಲೆ ಅಂತಿಮಗೊಳ್ಳಲಿದೆ.

**3. ಅನುಬಂಧ-3:** ಖಾಸಗಿ ವಿಶ್ವವಿದ್ಯಾಲಯಗಳಿಗೆ 2025-26ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಪಟ್ಟಂತೆ ಹೊಸ ಕೋರ್ಸ್‌ಗಳ ಸಂಯೋಜನೆ/ವಿದ್ಯಾರ್ಥಿ ಪ್ರಮಾಣ ಹೆಚ್ಚಳ, ಕೋರ್ಸ್‌ಗಳ ಬದಲಾವಣೆ/ವೃತ್ತಿಪರ ಕೋರ್ಸ್‌ಗಳ ಸೀಟ್ ಮ್ಯಾಟ್ರಿಕ್ಸ್ ವೇಳಾಪಟ್ಟಿಯನ್ನು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಪರಿಶೀಲನೆಯ ನಂತರ ಹೊರಡಿಸಲಾಗುವುದು.

**4. ಅನುಬಂಧ-4:** ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿನ ಸಂಯೋಜಿತ ಕಾಲೇಜಿಗಳ ಶೈಕ್ಷಣಿಕ ಚಟುವಟಿಕೆಗಳಲ್ಲಿ ಏಕರೂಪತೆ ಮತ್ತು ನಿಖರತೆಗಾಗಿ 2025-26ನೇ ಶೈಕ್ಷಣಿಕ ವೇಳಾಪಟ್ಟಿಯನ್ನು ಹೊರಡಿಸಲಾಗುತ್ತಿದೆ.

ರಾಜ್ಯದ ಸಾರ್ವಜನಿಕ ಮತ್ತು ಖಾಸಗಿ ವಿಶ್ವವಿದ್ಯಾಲಯಗಳ ಸಂಯೋಜಿತ ಕಾಲೇಜುಗಳು ಅನುಬಂಧ-1 ರಿಂದ ಅನುಬಂಧ-4ರಲ್ಲಿನ ವೇಳಾಪಟ್ಟಿಗಳನ್ನು 2025-26ನೇ ಶೈಕ್ಷಣಿಕ ಸಾಲಿನಿಂದ ಜಾರಿಗೊಳಿಸುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

(ಹೆ. ವಿಕಾಸ್ ಬಾಬು)
ಸರ್ಕಾರದ ಉಪ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

# Press Note

**Affiliation and Academic Calendar of Events for 2025-26 finalized and announced by Higher Education Department**

In order to streamline the affiliation and Academic calendar process, the Higher Education Department has announced the schedule for the next academic year 2025-26 well in advance.

A number of representations had been received to announce the process and timelines in advance to ensure adequate time and clarity.

Keeping in view the interests of the students, affiliating colleges, public and private universities, the schedule has been finalized. It ensures that the process for 2025-26 begins in October 2024 and completes by March/April 2025 so that classes can commence on time for 2025-26. The Hon'ble Higher Education Minister Dr.M.C. Sudhakar reviewed and approved the timeframes for 2025-26.

**The following calendars have been announced:**

1. Annexure I - Affiliation calendar for non-professional degree and post-graduate courses for 2025-26 under all Universities - This would cover all degree and post graduate courses in non-professional courses where regular renewal of affiliation as well as affiliation for new courses, change in student strength etc are proposed by colleges. This is done in the UUCMS online portal.
2. Annexure 2 - Professional courses calendar for 2025-26 (Engineering and other professional courses) - This refers to providing no -objection certificates and finalization of the seat matrix for engineering and other professional courses. While finalization of admission depends on AICTE and NEET results, a tentative schedule for activities undertaken by the Government of Karnataka have been finalized.

3. Annexure 3 - Calendar for Private Universities for 2025-26 - This refers to the timelines for Private Universities to get approvals for new courses, change in intake as well as for professional course seat matrix with the Karnataka Higher Education Council.

4. Annexure 4 - Academic Calendar 2025-26 - This refers to the academic calendar to be followed by all Universities for the year 2025-26 to ensure uniformity and clarity.

All affiliated colleges, Public Universities and Private Universities are requested to ensure adherence to these timelines for the academic year 2025-26.

(K. Eakesh Babu)
Deputy Secretary to Government,
Higher Education Department (Universities)

**ಅನುಬಂಧ-1**
**ANNEXURE-1**

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ರ ಪ್ರಕರಣ 59ರಡಿ ಕ್ರಮವಹಿಸುವ ಸಂಯೋಜನಾ ಪ್ರಸ್ತಾವನೆಗಳಿಗೆ 2025-26ನೇ ಸಾಲಿನ ಸಂಯೋಜನಾ ಪ್ರಕ್ರಿಯೆಯ ವೇಳಾಪಟ್ಟಿ ಕುರಿತು

ಉಲ್ಲೇಖ: ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಏಕ ಕಡತ ಸಂಖ್ಯೆ: KSHEC/ADMN/6/2024-ADMINISTRATION-KSHEC.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಏಕ ಕಡತದಲ್ಲಿ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ದಿನಾಂಕ: 30.09.2024ರಂದು 2025-26ನೇ ಸಾಲಿನ ಶೈಕ್ಷಣಿಕ ಸಾಲಿಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 ರ ಪ್ರಕರಣ 59ರಡಿ Opening New Colleges, Extension of Existing Affiliation, Continuation of affiliation, Permanent Affiliation, Change/Addition of Subject, Division of Faculty, Increase of Intake, Change of name, Change of Place, Closer and withdrawal of a college, Local inquiry committee formation and Transfer of management ವಿವಿಧ ರೀತಿಯ ಎಲ್ಲಾ ಸಂಯೋಜನ ಪ್ರಸ್ತಾವನೆಗಳನ್ನು ಕಡ್ಡಾಯವಾಗಿ UUCMS ಆನ್‌ಲೈನ್ ತಂತ್ರಾಂಶದ ಮುಖಾಂತರ ಸರ್ಕಾರಕ್ಕೆ ಸಲ್ಲಿಸಲು 2025-26ನೇ ಶೈಕ್ಷಣಿಕ ಸಾಲಿನ ಸಂಯೋಜನಾ ವೇಳಾಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸಿದ್ದು, ಸದರಿ ಸಂಯೋಜನಾ ವೇಳಾಪಟ್ಟಿಯನ್ನು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಅನುಷ್ಠಾನಗೊಳಿಸಲು ಸರ್ಕಾರದಿಂದ ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ.

ರಾಜ್ಯದ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59ರಡಿ ವಿಶ್ವವಿದ್ಯಾನಿಲಯಗಳು ಮತ್ತು ಸ್ಥಳೀಯ ವಿಚಾರಣಾ ಸಮಿತಿಯು ಕೈಗೊಳ್ಳಬೇಕಾದ ನಿಯಮಗಳನ್ನು ಮತ್ತು ಕ್ರಮಗಳನ್ನು ವಿವರಿಸಲಾಗಿದೆ.

ಮೇಲ್ಕಂಡ ಅಂಶಗಳನ್ವಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 ರ ಪ್ರಕರಣ 59ರಡಿ Opening New Colleges, Extension of Existing Affiliation, Continuation of affiliation, Permanent Affiliation, Change/Addition of Subject, Division of Faculty, Increase of Intake, Change of name, Change of Place, Closer and withdrawal of a college, Local inquiry committee formation and Transfer of management ವಿವಿಧ ರೀತಿಯ ಎಲ್ಲಾ ಸಂಯೋಜನ ಪ್ರಸ್ತಾವನೆಗಳನ್ನು ಕಡ್ಡಾಯವಾಗಿ UUCMS ಆನ್‌ಲೈನ್ ತಂತ್ರಾಂಶದ ಮುಖಾಂತರ ಸರ್ಕಾರಕ್ಕೆ ಸಲ್ಲಿಸಲು 2025-26ನೇ ಶೈಕ್ಷಣಿಕ ಸಾಲಿನ ಸಂಯೋಜನಾ ವೇಳಾಪಟ್ಟಿಯನ್ನು ಜಾರಿಗೊಳಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂ. ಇಡಿ 212 ಯುಎನ್‌ಇ 2024, ಬೆಂಗಳೂರು, ದಿನಾಂಕ:04.10.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಸಾರ್ವಜನಿಕ ವಿಶ್ವವಿದ್ಯಾನಿಲಯಗಳಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59ರಡಿ ಕ್ರಮವಹಿಸುವ ಸಂಯೋಜನಾ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ 2025-26ನೇ ಶೈಕ್ಷಣಿಕ ಸಾಲಿನ ಸಂಯೋಜನಾ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಕಡ್ಡಾಯವಾಗಿ ಜಾರಿಗೊಳಿಸಲು ಆದೇಶಿಸಿದೆ.

**Tentative Date for Affiliation Process through UUCMS On-line portal for the Academic Year 2025-2026**

| Sl No | Activities | Start Date | End Date |
|---|---|---|---|
| 1 | Notification for Affiliation and to Set Date in Deputy Secretary Login | 09th October2024 | - |
| 2 | Universities to Set Affiliation Fees | 09th October 2024 | 25th October 2024 |
| 3 | Colleges to Apply for Affiliation along with Prescribed Fees | 25th October 2024 | 15th November 2024 |

| | | | |
|---|---|---|---|
| 4 | Universities to constitute LIC Committees, Visit Colleges and Submit Online Preliminary Report | 15th November 2024 | 11th December 2024 |
| 5 | Registrars to approve preliminary report, generate scores and send it online to LIC team for final submission | 11th December 2024 | 18th December 2024 |
| 6 | LIC Committees to Resubmit the Final Report based on the Scores Obtained by Colleges for further Process | 18th December 2024 | 27th December 2024 |
| 7 | Universities to place LIC reports before Statutory bodies and submit the Reports online to Govt. for approvals | 27th December 2024 | 15th January 2025 |
| 8 | Universities to approve affiliation for those Colleges eligible to be approved by the universities * | 15th January 2025 | 30th January 2025 |
| 9 | Universities to submit the remaining proposals along with LIC Report to Govt. for further approvals. | 30th January 2025 | 3rd February 2025 |
| 10 | Higher Education Department to approve the received proposals. | 3rd February 2025 | 27th March 2025 |
| 11 | Deputy Secretary to approve the Proposals in his/her Login for the Universities and Colleges to be Visible ** | 27th March 2025 | 31st March 2025 |

* The colleges approved at the Universities Level will be made visible for Admission Process along with Intake/ Course/ Combination/Subject for the applicants/Colleges.

** The Colleges approved at the Government level will be made visible along with their Intake/ Course/ Combination/Subject after 27th March 2025 for applicants/colleges.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆ. ವಿಕೇಶ್ ಬಾಬು)
ಸರ್ಕಾರದ ಉಪ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

**ಇವರಿಗೆ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
6. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳು.
7. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
8. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನ ಕಾಲೇಜುಗಳ ಪ್ರಾಂಶುಪಾಲರಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರ ಮುಖಾಂತರ).
9. ಕುಲಸಚಿವರು, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳು.
10. ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳ ಕಾಲೇಜುಗಳಿಗೆ (ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಮೂಲಕ).
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ:**

1. ಸನ್ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು(ವಿಶ್ವವಿದ್ಯಾನಿಲಯಗಳು/ಕಾಲೇಜು ಶಿಕ್ಷಣ/ತಾಂತ್ರಿಕ/ಯೋಜನೆ ಶಾಖೆ), ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ. ವಿ.ವಿ-1/ವಿ.ವಿ-2/ ಕಾಲೇಜು ಶಿಕ್ಷಣ/ ತಾಂತ್ರಿಕ ಶಿಕ್ಷಣ/ ಯೋಜನಾ ಶಾಖೆ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ.
6. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ, ಇವರಿಗೆ (ಉನ್ನತ ಶಿಕ್ಷಣ ಇಲಾಖೆ ಜಾಲತಾಣದಲ್ಲಿ ಪ್ರಕಟಿಸಲು)

**ಅನುಬಂಧ-2**
**ANNEXURE-2**

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2025-26ನೇ ಶೈಕ್ಷಣಿಕ ಸಾಲಿಗೆ ವೃತ್ತಿಪರ ಕೋರ್ಸುಗಳ (Professional Courses) ಪ್ರವೇಶಾತಿ ಪ್ರಕ್ರಿಯೆಯ ವೇಳಾಪಟ್ಟಿ ಕುರಿತು.

ಉಲ್ಲೇಖ: ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಏಕ ಕಡತ ಸಂಖ್ಯೆ: KSHEC/ADMN/6/2024-ADMINISTRATION-KSHEC.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಏಕ ಕಡತದಲ್ಲಿ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ದಿನಾಂಕ: 30.09.2024ರಂದು 2025-26ನೇ ಸಾಲಿನ ಶೈಕ್ಷಣಿಕ ಸಾಲಿಗೆ ವೃತ್ತಿಪರ ಕೋರ್ಸುಗಳ (Professional Courses) ಪ್ರವೇಶಾತಿ ಪ್ರಕ್ರಿಯೆಯ ವೇಳಾಪಟ್ಟಿ ಸಿದ್ಧಪಡಿಸಿ ಸಲ್ಲಿಸಿದ್ದು, ಸದರಿ ವೇಳಾಪಟ್ಟಿಯನ್ನು ರಾಜ್ಯದ ಎಲ್ಲಾ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳಿಗೆ ಅನುಷ್ಠಾನಗೊಳಿಸಲು ಸರ್ಕಾರದಿಂದ ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ.

ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ (AICTE), ನವದೆಹಲಿ ಹಾಗೂ ಕೌನ್ಸಿಲ್ ಆಫ್ ಆರ್ಕಿಟೆಕ್ಚರ್, ನವದೆಹಲಿ ಇವರ ಮಾರ್ಗಸೂಚಿಯನ್ವಯ ರಾಜ್ಯದ ತಾಂತ್ರಿಕ ಕಾಲೇಜು /ಶಿಕ್ಷಣ ಸಂಸ್ಥೆಗಳಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸುಗಳ ಪ್ರವೇಶಾತಿ ಪ್ರಕ್ರಿಯೆಯನ್ನು ಕೈಗೊಳ್ಳಬೇಕಾಗುತ್ತದೆ. ರಾಜ್ಯದ ಎಲ್ಲಾ ಇಂಜಿನಿಯರಿಂಗ್ /ಆರ್ಕಿಟೆಕ್ಚರ್ ಕಾಲೇಜು/ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಕೋರ್ಸುಗಳ ಸೀಟುಗಳನ್ನು ಹಾಗೂ ಖಾಸಗಿ ವಿಶ್ವವಿದ್ಯಾಲಯಗಳ ಅಧಿನಿಯಮ/ ನಿಯಮಗಳನ್ವಯ ರಚನೆಯಾಗಿರುವ ರಾಜ್ಯದ ಖಾಸಗಿ ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದ ತಾಂತ್ರಿಕ ಕೋರ್ಸುಗಳ ಸೀಟುಗಳನ್ನು ಸಹ ಸೇರ್ಪಡೆಗೊಳಿಸಿ ಪ್ರತಿ ಶೈಕ್ಷಣಿಕ ವರ್ಷದಲ್ಲಿ ಸೀಟ್ ಮ್ಯಾಟ್ರಿಕ್ಸ್‌ನ್ನು ತಯಾರಿಸಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಸೀಟು ಹಂಚಿಕೆ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತಿದೆ.

ನಿಗಧಿತ ಕಾಲಾವಧಿಯ ವೇಳಾಪಟ್ಟಿ ಇಲ್ಲದೇ ಇರುವುದರಿಂದ, ಪ್ರತಿ ಶೈಕ್ಷಣಿಕ ವರ್ಷ ಸೀಟ್ ಮ್ಯಾಟ್ರಿಕ್ಸ್ ಪ್ರಕ್ರಿಯೆ ಹಾಗೂ ಪ್ರವೇಶಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ವಿಳಂಬವಾಗುತ್ತಿದ್ದು, ಈ ವಿಳಂಭವನ್ನು ತಪ್ಪಿಸುವ ಉದ್ದೇಶದಿಂದ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಮುಂಬರುವ ಶೈಕ್ಷಣಿಕ ಸಾಲಿನಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸುಗಳ ಪ್ರವೇಶಾತಿ ಪ್ರಕ್ರಿಯೆಯನ್ನು ನಿಗದಿತ ಕಾಲಾವಧಿಯಲ್ಲಿ ಕೈಗೊಳ್ಳಲು 2025-26ನೇ ಸಾಲಿನ ಶೈಕ್ಷಣಿಕ ಸಾಲಿಗೆ ವೃತ್ತಿಪರ ಕೋರ್ಸುಗಳ (Professional Courses) ಪ್ರವೇಶಾತಿ ಪ್ರಕ್ರಿಯೆಯ ವೇಳಾಪಟ್ಟಿಯನ್ನು ರಾಜ್ಯದ ಎಲ್ಲಾ ಡೀಮ್ಡ್/ಖಾಸಗಿ ವಿಶ್ವವಿದ್ಯಾನಿಲಯಗಳಿಗೆ ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂ. ಇಡಿ 212 ಯುಎನ್ಇ 2024, ಬೆಂಗಳೂರು, ದಿನಾಂಕ:04.10.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ 2025-26ನೇ ಶೈಕ್ಷಣಿಕ ಸಾಲಿನಲ್ಲಿ ಇಂಜಿನಿಯರಿಂಗ್/ ಆರ್ಕಿಟೆಕ್ಚರ್ ಕಾಲೇಜುಗಳಲ್ಲಿನ ಹಾಗೂ ರಾಜ್ಯದ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳ ಬಿ.ಇ, ಬಿ.ಟೆಕ್, ಬಿಆರ್ಕ್ ಸ್ನಾತಕ ಕೋರ್ಸುಗಳು, ಡಿಪ್ಲೊಮಾಲ್ಯಾಟರಲ್ ಎಂಟ್ರಿ (2ನೇವರ್ಷದ 3ನೇಸೆಮಿಸ್ಟರ್) ಹಾಗೂ ಸ್ನಾತಕೋತ್ತರ ಪದವಿ ಕೋರ್ಸುಗಳ ಪ್ರವೇಶಾತಿ ಪ್ರಕ್ರಿಯೆಯನ್ನು ನಿಗದಿತ ಅವಧಿಯಲ್ಲಿ ಕೈಗೊಳ್ಳುವ ಸಲುವಾಗಿ ವೇಳಾಪಟ್ಟಿಯನ್ನು ಈ ಕೆಳಕಂಡ **TABLE- I, II ಮತ್ತು III** ರಲ್ಲಿರುವಂತೆ ಕಡ್ಡಾಯವಾಗಿ ಜಾರಿಗೊಳಿಸಿ ಆದೇಶಿಸಿದೆ.

**TABLE- I**
**(ಬಿ.ಇ/ಬಿ.ಟೆಕ್ ಮತ್ತು ಬಿ.ಆರ್ಕ್ ಸ್ನಾತಕ ಕೋರ್ಸುಗಳ ವೇಳಾಪಟ್ಟಿ)**

| ಕ್ರ. ಸಂ. | ವಿವರಗಳು (Particulars) | ದಿನಾಂಕ |
|---|---|---|
| 1 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರು ಸ್ಥಳ ಪರಿಶೀಲನಾ ವರದಿಯನ್ನು ( LIC) ಸರ್ಕಾರಕ್ಕೆ ಸಲ್ಲಿಸುವ ಅವಧಿ | 10ನೇ ಏಪ್ರಿಲ್ 2025 |
| 2 | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸ್ನಾತಕ ಕೋರ್ಸುಗಳ ಸಾಮಾನ್ಯ ಪ್ರವೇಶ ಪರೀಕ್ಷೆ (CET) ನಡೆಯುವ ದಿನಾಂಕ | 18 ಮತ್ತು 19ನೇ ಏಪ್ರಿಲ್ 2025 |

| | | |
|---|---|---|
| 3 | ಎಐಸಿಟಿಇಯು ಕಾಲೇಜುಗಳ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸುಗಳಿಗೆ Letter of Approval (LoA) ಹಾಗೂ Extension of Approval (EoA) ನೀಡಿ, ವೆಬ್‌ಸೈಟ್ ನಲ್ಲಿ ಪ್ರಕಟಿಸುವ ದಿನಾಂಕ | 30ನೇ ಏಪ್ರಿಲ್ 2025 |
| 4 | ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು (KSHEC) ಖಾಸಗಿ ವಿಶ್ವವಿದ್ಯಾಲಯಗಳ ಕೋರ್ಸುಗಳ ಪ್ರಸ್ತಾವನೆಗಳನ್ನು ಪರಿಶೀಲಿಸಿ ವರದಿಯನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡುವ ದಿನಾಂಕ | 28ನೇ April 2025 |
| 5 | ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (NOC) ನೀಡುವ ಪ್ರಸ್ತಾವನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಅನುಮೋದನೆಗಾಗಿ ಸಲ್ಲಿಸುವ ದಿನಾಂಕ | 12ನೇ ಮೇ 2025 |
| 6 | ಉನ್ನತ ಶಿಕ್ಷಣ ಇಲಾಖೆಯ ವಿಶ್ವವಿದ್ಯಾಲಯ ಶಾಖೆಯು ಖಾಸಗಿ/ ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿನ ಕೋರ್ಸುಗಳ ಮಾಹಿತಿಗಳನ್ನು ತಾಂತ್ರಿಕ ಶಿಕ್ಷಣ ಶಾಖೆಗೆ ನೀಡುವ ದಿನಾಂಕ | 12ನೇ ಮೇ 2025 |
| 7 | ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (NOC) ನೀಡುವ ಅವಧಿ (ತಾಂತ್ರಿಕ ಶಾಖೆಯಿಂದ) | 21ನೇ ಮೇ 2025 |
| 8 | ಸ್ನಾತಕ ಕೋರ್ಸುಗಳ ಕರಡು ಸೀಟ್ ಮ್ಯಾಟ್ರಿಕ್ಸ್ ಪ್ರಕಟಣೆ | 23ನೇ ಮೇ 2025 (ಆಕ್ಷೇಪಣೆಗೆ 5 ದಿನಗಳ ಕಾಲಾವಕಾಶ) |
| 9 | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಿ.ಇ.ಟಿ ಫಲಿತಾಂಶ ಪ್ರಕಟಣೆ | 28ನೇ ಮೇ 2025 |
| 10 | ಸ್ನಾತಕ ಕೋರ್ಸುಗಳ ಅಂತಿಮ ಸೀಟ್ ಮ್ಯಾಟ್ರಿಕ್ಸ್ ಪ್ರಕಟಣೆ | 30ನೇ ಮೇ 2025 |
| 11 | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸೀಟ್ ಮ್ಯಾಟ್ರಿಕ್ಸನ್ನು ವೆಬ್‌ಸೈಟ್ ನಲ್ಲಿ ಪ್ರಕಟಿಸುವ ದಿನಾಂಕ | 5ನೇ ಜೂನ್ 2025 |
| 12 | ಕೆ.ಇ.ಎಯಿಂದ ಸ್ನಾತಕ ಕೋರ್ಸುಗಳ ಮೊದಲನೇ ಸುತ್ತಿನ ಕೌನ್ಸಿಲಿಂಗ್ | 25ನೇ ಜೂನ್ 2025 |
| 13 | ಕೆ.ಇ.ಎಯಿಂದ ಸ್ನಾತಕ ಕೋರ್ಸುಗಳ ಎರಡನೇ ಸುತ್ತಿನ ಕೌನ್ಸಿಲಿಂಗ್ | 10ನೇ ಜುಲೈ 2025 |
| 14 | ಕೆ.ಇ.ಎಯಿಂದ ಸ್ನಾತಕ ಕೋರ್ಸುಗಳ ಎರಡನೇ ಸುತ್ತಿನ ಮುಂದುವರದ ಕೌನ್ಸಿಲಿಂಗ್ (ವಿಶೇಷ ಹಾಗೂ ಅಂತಿಮ ಸುತ್ತು) | 25ನೇ ಜುಲೈ 2025 |
| 15 | ಸ್ನಾತಕ ಪದವಿ ತರಗತಿಗಳು ಪ್ರಾರಂಭ | 1ನೇ ಆಗಸ್ಟ್ 2025 |

**TABLE- II**

**(ಬಿ.ಇ/ಬಿ.ಟೆಕ್ ಸ್ನಾತಕ ಪದವಿ ಲ್ಯಾಟರಲ್ ಎಂಟ್ರಿ ಹಾಗೂ ವೃತ್ತಿಪರ ಡಿಪ್ಲೋಮಾ (2ನೇ ವರ್ಷದ 3ನೇ ಸೆಮಿಸ್ಟರ್) ಕೋರ್ಸುಗಳ ವೇಳಾಪಟ್ಟಿ)**

| ಕ್ರ. ಸಂ. | ವಿವರಗಳು (Particulars) | ದಿನಾಂಕ |
|---|---|---|
| 1 | 2023-24ನೇ ಸಾಲಿನ ಭರ್ತಿಯಾಗದೇ ಖಾಲಿ ಇರುವ (Unfilled Seats) ಸೀಟುಗಳನ್ನು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ/ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಸರ್ಕಾರಕ್ಕೆ ಸಲ್ಲಿಸುವ ಅವಧಿ | 10ನೇ ಏಪ್ರಿಲ್ 2025 |
| 2 | ಸ್ನಾತಕ ಲ್ಯಾಟರಲ್ ಎಂಟ್ರಿ ಕೋರ್ಸುಗಳ ಕರಡು ಸೀಟ್ ಮ್ಯಾಟ್ರಿಕ್ಸ್ ಪ್ರಕಟಣೆ | 20ನೇ ಮೇ 2025 (ಆಕ್ಷೇಪಣೆಗೆ 3 ದಿನಗಳ ಕಾಲಾವಕಾಶ) |
| 3 | ಸ್ನಾತಕ ಲ್ಯಾಟರಲ್ ಎಂಟ್ರಿ ಕೋರ್ಸುಗಳ ಅಂತಿಮ ಸೀಟ್ ಮ್ಯಾಟ್ರಿಕ್ಸ್ ಪ್ರಕಟಣೆ | 30ನೇ ಮೇ 2025 |
| 4 | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಡಿಪ್ಲೋಮಾ ಸಾಮಾನ್ಯ ಪ್ರವೇಶ ಪರೀಕ್ಷೆ (CET) ದಿನಾಂಕ | 7ನೇ ಜೂನ್ 2025 |
| 5 | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಲ್ಯಾಟರಲ್ ಎಂಟ್ರಿಸೀಟ್ ಮ್ಯಾಟ್ರಿಕ್ಸನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ದಿನಾಂಕ | 15ನೇ ಜೂನ್ 2025 |
| 6 | ತಾಂತ್ರಿಕ ಶಿಕ್ಷಣ ನಿರ್ದೇಶನಾಲಯವು ಡಿಪ್ಲೋಮಾ ಕೋರ್ಸುಗಳ ಅಂತಿಮ ವರ್ಷದ ವಿದ್ಯಾರ್ಥಿಗಳ ಫಲಿತಾಂಶ ಪ್ರಕಟಣೆಯ ದಿನಾಂಕ | 25ನೇ ಜೂನ್ 2025 |
| 7 | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ DCET ಫಲಿತಾಂಶ ಪ್ರಕಟಣೆ | 10ನೇ ಜುಲೈ 2025 |
| 8 | ಕೆ.ಇ.ಎಯಿಂದ ಸ್ನಾತಕ ಲ್ಯಾಟರಲ್ ಎಂಟ್ರಿ ಕೋರ್ಸುಗಳ ಮೊದಲನೇ ಸುತ್ತಿನ ಕೌನ್ಸಿಲಿಂಗ್ | 20ನೇ ಜುಲೈ 2025 |
| 9 | ಕೆ.ಇ.ಎಯಿಂದ ಸ್ನಾತಕ ಲ್ಯಾಟರಲ್ ಎಂಟ್ರಿ ಕೋರ್ಸುಗಳ ಎರಡನೇ ಸುತ್ತಿನ ಕೌನ್ಸಿಲಿಂಗ್ | 30ನೇ ಜುಲೈ 2025 |
| 10 | ತರಗತಿಗಳು ಪ್ರಾರಂಭ | 5ನೇ ಆಗಸ್ಟ್ 2025 |

**TABLE- III**

**(ಎಂಬಿಎ, ಎಂಸಿಎ, ಎಂಟೆಕ್ ಮತ್ತು ಎಂ.ಆರ್ಕ್ ಸ್ನಾತಕೋತ್ತರ ಕೋರ್ಸುಗಳ ವೇಳಾಪಟ್ಟಿ)**

| ಕ್ರ. ಸಂ. | ವಿವರಗಳು (Particulars) | ದಿನಾಂಕ |
|---|---|---|
| 1 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರು ಸ್ಥಳ ಪರಿಶೀಲನಾ ವರದಿಯನ್ನು (LIC) ಸರ್ಕಾರಕ್ಕೆ ಸಲ್ಲಿಸುವ ಅವಧಿ | 10ನೇ ಏಪ್ರಿಲ್ 2025 |
| 2 | ಎಐಸಿಟಿಇಯು ಕಾಲೇಜುಗಳ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸುಗಳಿಗೆ Letter of Approval (LoA) ಹಾಗೂ Extension of Approval (EoA) ನೀಡಿ, ವೆಬ್‌ಸೈಟ್ ನಲ್ಲಿ ಪ್ರಕಟಿಸುವ ದಿನಾಂಕ | 30ನೇ ಏಪ್ರಿಲ್ 2025 |
| 3 | ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು (KSHEC) ಖಾಸಗಿ ವಿಶ್ವವಿದ್ಯಾಲಯಗಳ ಕೋರ್ಸುಗಳ ಪ್ರಸ್ತಾವನೆಗಳನ್ನು ಪರಿಶೀಲಿಸಿ ವರದಿಯನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡುವ ದಿನಾಂಕ | 30ನೇ ಏಪ್ರಿಲ್ 2025 |
| 4 | ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (NOC) ನೀಡುವ ಅವಧಿ (ತಾಂತ್ರಿಕ ಶಾಖೆಯಿಂದ) | 21ನೇ ಮೇ 2025 |
| 5 | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸ್ನಾತಕಕೋತ್ತರ ಕೋರ್ಸುಗಳ ಸಾಮಾನ್ಯ ಪ್ರವೇಶ ಪರೀಕ್ಷೆ (CET) | 30ನೇ ಜೂನ್ 2025 |
| 6 | ಉನ್ನತ ಶಿಕ್ಷಣ ಇಲಾಖೆಯ ವಿಶ್ವವಿದ್ಯಾಲಯ ಶಾಖೆಯು ಸಾರ್ವಜನಿಕ ವಿಶ್ವದ್ಯಾಲಯಗಳ ಸಂಯೋಜಿತ ಕಾಲೇಜುಗಳ ನಿರಾಕ್ಷೇಪಣಾ ಪ್ರಮಾಣಪತ್ರ (NOC) ನೀಡುವ ಪ್ರಸ್ತಾವನೆಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಅನುಮೋದನೆಗಾಗಿ ಸಲ್ಲಿಸುವ ದಿನಾಂಕ | 15ನೇ ಜುಲೈ 2025 |
| 77 | ವಿಶ್ವವಿದ್ಯಾಲಯ ಶಾಖೆಯು ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯ ಹಾಗೂ ಸಾರ್ವಜನಿಕ ವಿಶ್ವದ್ಯಾಲಯಗಳ ಸಂಯೋಜಿತ ಕಾಲೇಜುಗಳ ನಿರಾಕ್ಷೇಪಣಾ ಪ್ರಮಾಣಪತ್ರ ಮತ್ತು ಸಂಯೋಜನಾ ಆದೇಶಗಳ ಮಾಹಿತಿಗಳನ್ನು ತಾಂತ್ರಿಕ ಶಿಕ್ಷಣ ಶಾಖೆಗೆ ನೀಡುವ ದಿನಾಂಕ | 30ನೇ ಜುಲೈ 2025 |
| 8 | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪಿ.ಜಿ. ಸಿ.ಇ.ಟಿ ಫಲಿತಾಂಶ ಪ್ರಕಟಣೆ | 5ನೇ ಆಗಸ್ಟ್ 2025 |
| 9 | ಸ್ನಾತಕೋತ್ತರ ಕೋರ್ಸುಗಳ ಕರಡು ಸೀಟ್ ಮ್ಯಾಟ್ರಿಕ್ಸ್ ಪ್ರಕಟಣೆ | 10ನೇ ಆಗಸ್ಟ್ 2025 (ಆಕ್ಷೇಪಣೆಗೆ 5 ದಿನಗಳ ಕಾಲಾವಕಾಶ) |
| 10 | ಸ್ನಾತಕೋತ್ತರ ಕೋರ್ಸುಗಳ ಅಂತಿಮ ಸೀಟ್ ಮ್ಯಾಟ್ರಿಕ್ಸ್ ಪ್ರಕಟಣೆ | 20ನೇ ಆಗಸ್ಟ್ 2025 |
| 11 | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ನಾತಕೋತ್ತರ ಕೋರ್ಸುಗಳ ಸೀಟ್ ಮ್ಯಾಟ್ರಿಕ್ಸ್‌ನ್ನು ವೆಬ್‌ಸೈಟ್‌ನಲ್ಲಿ ಪ್ರಕಟಣೆ | 20ನೇ ಆಗಸ್ಟ್ 2025 |
| 12 | ಕೆ.ಇ.ಎಯಿಂದ ಸ್ನಾತಕೋತ್ತರ ಕೋರ್ಸುಗಳ ಮೊದಲನೇ ಸುತ್ತಿನ ಕೌನ್ಸಿಲಿಂಗ್ | 26ನೇ ಆಗಸ್ಟ್ 2025 |
| 13 | ಕೆ.ಇ.ಎಯಿಂದ ಸ್ನಾತಕೋತ್ತರ ಕೋರ್ಸುಗಳ ಎರಡನೇ ಸುತ್ತಿನ ಕೌನ್ಸಿಲಿಂಗ್ | 4ನೇ ಸೆಪ್ಟೆಂಬರ್ 2025 |
| 14 | ತರಗತಿಗಳು ಪ್ರಾರಂಭ | 10ನೇ ಸೆಪ್ಟೆಂಬರ್ 2025 |

ಈ ವೇಳಾಪಟ್ಟಿಯನ್ನು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರು ಕಡ್ಡಾಯವಾಗಿ ಅಳವಡಿಸಿಕೊಂಡು ಪ್ರವೇಶಾತಿ ಪ್ರಕ್ರಿಯೆಯನ್ನು ನಡೆಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ಕುಮಾರ್) 04/10/2024
ಸರ್ಕಾರದ ಉಪ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಮತ್ತು ಯೋಜನೆ).

**ಇವರಿಗೆ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.

3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಗಾಂಧಿನಗರ, ಬೆಂಗಳೂರು
5. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
6. ರಾಜ್ಯದ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳು ಹಾಗೂ ಖಾಸಗಿ/ಡೀಮ್ಡ್ ವಿಶ್ವವಿದ್ಯಾಲಯಗಳಿಗೆ (ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮುಖಾಂತರ)
7. ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ/ತಾಂತ್ರಿಕ/ಕಾಲೇಜು ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು(ವಿಶ್ವವಿದ್ಯಾನಿಲಯಗಳು/ಕಾಲೇಜು ಶಿಕ್ಷಣ/ತಾಂತ್ರಿಕ/ಯೋಜನೆ ಶಾಖೆ), ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ. ವಿ.ವಿ-1/ವಿ.ವಿ-2/ ಕಾಲೇಜು ಶಿಕ್ಷಣ/ ತಾಂತ್ರಿಕ ಶಿಕ್ಷಣ/ ಯೋಜನಾ ಶಾಖೆ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ.
6. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ, ಇವರಿಗೆ (ಉನ್ನತ ಶಿಕ್ಷಣ ಇಲಾಖೆ ಜಾಲತಾಣದಲ್ಲಿ ಪ್ರಕಟಿಸಲು)

**ಅನುಬಂಧ-3**
**ANNEXURE-3**

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಖಾಸಗಿ ವಿಶ್ವವಿದ್ಯಾಲಯಗಳ ಸಂಯೋಜನಾ ಪ್ರಸ್ತಾವನೆಗಳಿಗೆ 2025-26ನೇ ಸಾಲಿನ ಸಂಯೋಜನಾ ಪ್ರಕ್ರಿಯೆಯ ವೇಳಾಪಟ್ಟಿ ಕುರಿತು

ಉಲ್ಲೇಖ: ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಏಕ ಕಡತ ಸಂಖ್ಯೆ: KSHEC/ADMN/6/2024-ADMINISTRATION-KSHEC.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಏಕ ಕಡತದಲ್ಲಿ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ದಿನಾಂಕ: 30.09.2024ರಂದು 2025-26ನೇ ಸಾಲಿನ ಶೈಕ್ಷಣಿಕ ಸಾಲಿಗೆ ರಾಜ್ಯದ ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದ ವಿವಿಧ ರೀತಿಯ ಎಲ್ಲಾ ಸಂಯೋಜನೆ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಲು 2025-26ನೇ ಶೈಕ್ಷಣಿಕ ಸಾಲಿನ ಸಂಯೋಜನಾ ವೇಳಾಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸಿದ್ದು, ಸದರಿ ಸಂಯೋಜನಾ ವೇಳಾಪಟ್ಟಿಯನ್ನು ರಾಜ್ಯದ ಎಲ್ಲಾ ಖಾಸಗಿ ವಿಶ್ವವಿದ್ಯಾನಿಲಯಗಳಿಗೆ ಅನುಷ್ಠಾನಗೊಳಿಸಲು ಸರ್ಕಾರದಿಂದ ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ವಯ ರಾಜ್ಯದ ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದ ವಿವಿಧ ರೀತಿಯ ಎಲ್ಲಾ ಸಂಯೋಜನೆ ಪ್ರಸ್ತಾವನೆಗಳನ್ನು ನಿಯಮಾನುಸಾರ ಸರ್ಕಾರಕ್ಕೆ ಸಲ್ಲಿಸಲು 2025-26ನೇ ಶೈಕ್ಷಣಿಕ ಸಾಲಿನ ಸಂಯೋಜನಾ ವೇಳಾಪಟ್ಟಿಯನ್ನು ಜಾರಿಗೊಳಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂ. ಇಡಿ 212 ಯುಎನ್ಇ 2024, ಬೆಂಗಳೂರು, ದಿನಾಂಕ:04.10.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಖಾಸಗಿ ವಿಶ್ವವಿದ್ಯಾಲಯಗಳ ವಿವಿಧ ರೀತಿಯ ಎಲ್ಲಾ ಸಂಯೋಜನಾ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ 2025-26ನೇ ಶೈಕ್ಷಣಿಕ ಸಾಲಿನ ಸಂಯೋಜನಾ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಕಡ್ಡಾಯವಾಗಿ ಜಾರಿಗೊಳಿಸಿ ಆದೇಶಿಸಿದೆ.

**Dates for Private Universities Increase/Decrease in take/New Programs Approval Process by KSHEC/HED**

| Sl. No | Particular | Start Date | End Date | Responsibilities |
|---|---|---|---|---|
| 1 | Notification for Pvt Universities to Apply for Increase /Decrease in Take/New Program/Others | 07-10-2024 | 04-11-2024 | ED – KSHEC |
| 2 | Pvt Universities to Apply for Increase/Decrease in take /New Program/Others | 04-11-2024 | 02-12-2024 | Pvt Universities |
| 3 | Evaluation of Applications and Constituting the Committees for Inspection | 02-12-2024* | 06-01-2025 | ED - KSHEC |
| 4 | Visit to Pvt Universities and Submitting the Reports to HED | 15-01-2025** | 28-02-2025 | ED – KSHEC |
| 5 | Approval by HED of the Reports | 15-02-2025*** | 27-03-2025 | Pr.S – HED |
| 6 | Communication to Pvt Universities and KEA for Seat Matrix | 27-03-2025 | 31-03-2025 | Pr.S – HED |
| 7 | Release of Seat Matrix by KEA | -------------- | | KEA |

**** Evaluation of applications and Constitution of committees may start as and when KSHEC starts receiving applications***

****The Visit to Pvt Universities may start as and when KSHEC gets the approvals for the committees.**

***** HED may approve the applications as and when they get the approval by Hon'ble Minister for Higher Education**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ವಿಕಾಶ್ ಬಾಬು)
ಸರ್ಕಾರದ ಉಪ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

ಇವರಿಗೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
6. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳು(ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಮುಖಾಂತರ).
7. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
8. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನ ಕಾಲೇಜುಗಳ ಪ್ರಾಂಶುಪಾಲರಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರ ಮುಖಾಂತರ).
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಸನ್ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು(ವಿಶ್ವವಿದ್ಯಾನಿಲಯಗಳು/ಕಾಲೇಜು ಶಿಕ್ಷಣ/ತಾಂತ್ರಿಕ/ಯೋಜನ ಶಾಖೆ), ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ. ವಿ.ವಿ-1/ವಿ.ವಿ-2/ ಕಾಲೇಜು ಶಿಕ್ಷಣ/ ತಾಂತ್ರಿಕ ಶಿಕ್ಷಣ/ ಯೋಜನಾ ಶಾಖೆ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ.
6. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ, ಇವರಿಗೆ (ಉನ್ನತ ಶಿಕ್ಷಣ ಇಲಾಖೆ ಜಾಲತಾಣದಲ್ಲಿ ಪ್ರಕಟಿಸಲು)

**ಅನುಬಂಧ-4**
**ANNEXURE-4**

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2025-26ನೇ ಶೈಕ್ಷಣಿಕ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಯ ಶೈಕ್ಷಣಿಕ ವೇಳಾಪಟ್ಟಿಯ ಕುರಿತು.

ಉಲ್ಲೇಖ: ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಏಕ ಕಡತ ಸಂಖ್ಯೆ: KSHEC/ADMN/6/2024-ADMINISTRATION-KSHEC.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಏಕ ಕಡತದಲ್ಲಿ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ದಿನಾಂಕ: 30.09.2024ರಂದು 2025-26ನೇ ಸಾಲಿನ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು /ಕಾಲೇಜು ಶಿಕ್ಷಣ/ಅನುದಾನ/ ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸಿದ್ದು, ಸದರಿ ಶೈಕ್ಷಣಿಕ ವೇಳಾಪಟ್ಟಿಯನ್ನು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಅನುಷ್ಠಾನಗೊಳಿಸಲು ಸರ್ಕಾರದಿಂದ ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ..

ವಿದ್ಯಾರ್ಥಿಗಳಿಗೆ ತರಗತಿಗಳನ್ನು ಮತ್ತು ಪರೀಕ್ಷೆಗಳನ್ನು ನಿಗದಿತ ಸಮಯದಲ್ಲಿ ನಡೆಸಿ ಫಲಿತಾಂಶವನ್ನು ಪ್ರಕಟಿಸುವುದು ಅತ್ಯಾವಶ್ಯಕವಾಗಿರುತ್ತದೆ. ವಿದ್ಯಾರ್ಥಿ ವೇತನವನ್ನು (Scholarship Programme) ವಿವಿಧ ಇಲಾಖೆಗಳಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಇದು ಸೂಕ್ತ ಸಮಯದಲ್ಲಿ ಸಮರ್ಪಕವಾಗಿ ವಿದ್ಯಾರ್ಥಿಗಳಿಗೆ ಸದ್ಬಳಕೆಯಾಗಬೇಕಾಗಿರುವುದರಿಂದ, ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಸರ್ಕಾರವು ಹೊರಡಿಸಬೇಕಾಗಿರುತ್ತದೆ.

ಮೇಲ್ಕಂಡ ಅಂಶಗಳನ್ವಯ 2025-26ನೇ ಸಾಲಿನ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು /ಕಾಲೇಜು ಶಿಕ್ಷಣ/ಅನುದಾನ/ ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಜಾರಿಗೊಳಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂ. ಇಡಿ 212 ಯುಎನ್‌ಇ 2024, ಬೆಂಗಳೂರು, ದಿನಾಂಕ:04.10.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2025-26ನೇ ಸಾಲಿನ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು /ಕಾಲೇಜು ಶಿಕ್ಷಣ/ಅನುದಾನ/ ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಕಡ್ಡಾಯವಾಗಿ ಜಾರಿಗೊಳಿಸಲು ಆದೇಶಿಸಿದೆ.

## Academic Calendar of events for UG and PG programs for The Academic Year 2025-26

| Sl. No | Academic Activity | 2024-25 (as per GO dated 11.06.24 for UG courses) | 2024-25 (as per GO dated 11.06.24 for PG courses) | Proposed dates for the Academic Year 2025-26 | |
|---|---|---|---|---|---|
| | | | | UG | PG |
| 1 | Commencement of I Semester Admissions | 15.06.2024 | 02.09.2024 | 15-04-2025 | 19-08-2025 |
| 2 | Commencement of I, III and V Semester classes | 08.07.2024 (87 days) | 19.09.2024 (99 Days) | 09-06-2025 (92 days) | 01-09-2025 (91 Days) |

| | | | | | |
|---|---|---|---|---|---|
| 3 | End of I, III and V Semester classes | 06.11.2024 | 18.01.2025 | 26-09-2025 | 19-12-2025 |
| 4 | Commencement of I III and V Practical and Theory Examinations | 08.11.2024 | 20.01.2025 | 29-09-2025 | 22-12-2025 |
| 5 | Vacation* Examination(Practical and Theory),Valuation and Results | 08.11.2024 To 21.12.2024 | 20.01.2025 To 03.03.2025 | 29-09-2025 to 10-11-2025 | 23-12-2025 To 02-02-2026 |
| 6 | Commencement of II, IV and VI Semester classes | 23.12.2024 (93 days) | 04.03.2025 (95 Days) | 12-11-2025 (90 Days) | 03-03-2026 (92 Days) |
| 7 | End of II, IV and VI Semester classes | 19.04.2025 | 30.06.2025 | 24-02-2026 | 23-06-2026 |
| 8 | Commencement of II, IV and VI Semester Practical and Theory Examinations | 21.04.2025 | 03.07.2025 | 24-02-2026 | 25-06-2026 |
| 9 | Vacation* Examination (Practical and Theory),Valuation and Results | 21.04.2025 To 05.06.2025 | 03.07.2025 To 18.08.2025 | 24-02-2026 to 06-04-2026 | 25-06-2026 To 10-08-2026 |

*Teachers on vacations should take up the assigned examination work, including valuation.

***Note:* * The Admission modalities and other admission related dates will be decided by the respective universities**

****The calendar of events for colleges and universities in Karnataka has been planned for the academic year2025-26, considering the UGC stipulation of a minimum of 90 working days in a semester. This calendar considers a six day week. If any suggested dates coincide with a general holiday, activities will commence on the next working day. Provisions have also been made for examinations and evaluations. Teachers shall undertake work such as invigilation, valuation, or any other assigned work from either the college or the affiliating university. Universities in the Hyderabad Karnataka area, where hot summers are experienced, may advance the dates to accommodate the situation.***

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

([illegible])
ಸರ್ಕಾರದ ಉಪ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

<u>ಇವರಿಗೆ:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
5. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
6. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
7. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳು.
8. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
9. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನ ಕಾಲೇಜುಗಳ ಪ್ರಾಂಶುಪಾಲರಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರ ಮುಖಾಂತರ).
10. ಕುಲಸಚಿವರು, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳು.
11. ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳ ಕಾಲೇಜುಗಳಿಗೆ (ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಮೂಲಕ).
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಸನ್ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು(ವಿಶ್ವವಿದ್ಯಾನಿಲಯಗಳು/ಕಾಲೇಜು ಶಿಕ್ಷಣ/ತಾಂತ್ರಿಕ/ಯೋಜನೆ ಶಾಖೆ), ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ. ವಿ.ವಿ-1/ವಿ.ವಿ-2/ ಕಾಲೇಜು ಶಿಕ್ಷಣ/ ತಾಂತ್ರಿಕ ಶಿಕ್ಷಣ/ ಯೋಜನಾ ಶಾಖೆ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ.
6. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ, ಇವರಿಗೆ (ಉನ್ನತ ಶಿಕ್ಷಣ ಇಲಾಖೆ ಜಾಲತಾಣದಲ್ಲಿ ಪ್ರಕಟಿಸಲು)